158ನೆ ಶೂ.ವೇ SL.NO: ದಿನಾಂಕ: 16/03/26

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಪ್ರತಾಪಸಿಂಹ ನಾಯಕ್ ಇವರು ಶೂನ್ಯವೇಳೆ ಪ್ರಸ್ತಾಪಿಸಿರುವ ವಿಷಯಕ್ಕೆ ಮಾನ್ಯ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರ ಉತ್ತರ.

*****

ಸೂಚನೆ:

ಈ ಕೆಳಕಂಡ ಸಾರ್ವಜನಿಕ ಮಹತ್ವದ ಜರೂರು ವಿಷಯವನ್ನು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಲು ಅನುಮತಿ ನೀಡಬೇಕೆಂದು ತಮ್ಮಲ್ಲಿ ಈ ಮೂಲಕ ವಿನಂತಿ ಮಾಡಿಕೊಳ್ಳುತ್ತೇನೆ.

ಬಿಪಿಎಲ್ ಪಡಿತರ ಚೀಟಿ ವಿತರಿಸಲು ಈಗಲೂ ವಾರ್ಷಿಕ 1.20 ಲಕ್ಷ ರೂ. ಆದಾಯವನ್ನು ಮಾನದಂಡವಾಗಿ ಅನುಸರಿಸುತ್ತಿರುವುದು ಸರಿಯಲ್ಲ. ಬಿಪಿಎಲ್ ಕಾರ್ಡ್ ಪಡೆಯಲು ಈಗಲೂ 9 ವರ್ಷಗಳ ಹಳೆಯ ಮಾನದಂಡವನ್ನೇ ಬಳಸಲಾಗುತ್ತಿದೆ. ಆದ್ದರಿಂದ, ಮಾನದಂಡ ಬದಲಿಸುವ ತುರ್ತು ಅಗತ್ಯವಿದ್ದು, ನಿಜವಾದ ಫಲಾನುಭವಿಗಳಿಗೆ ಸವಲತ್ತು ತಲುಪಬೇಕಿದೆ. ಯಾವುದೇ ಯೋಜನೆಗಳ ಮಾನದಂಡವಾಗಲಿ ಕಾಲಕಾಲಕ್ಕೆ ಅವನ್ನು ಪರಾಮರ್ಶಿಸಿ, ಸೂಕ್ತ ಮಾರ್ಪಾಟು ಮಾಡುವುದು ಅತ್ಯಗತ್ಯ. ಬಿಪಿಎಲ್ ಕಾರ್ಡ್ ವಿಷಯದಲ್ಲಿ ಸಾಕಷ್ಟು ಗೊಂದಲಗಳಿದ್ದು, ಸೂಕ್ತ ನಿಯಮಗಳನ್ನು ರೂಪಿಸಲೇಬೇಕಾದ ಅನಿವಾರ್ಯತೆ ಸೃಷ್ಟಿಯಾಗಿದೆ.

ಇತ್ತೀಚಿನ ದಿನಗಳಲ್ಲಿ ಜೀವನ ವೆಚ್ಚ ಸತತವಾಗಿ ಹೆಚ್ಚುತ್ತಲೇ ಸಾಗಿದೆ. ಈಗಿನ ಬೆಲೆ ಏರಿಕೆಯ ಕಾಲದಲ್ಲಿ ವಾರ್ಷಿಕ 1.20 ಲಕ್ಷ ರೂ. ಆದಾಯ ಎನ್ನುವುದು ತೀರಾ ಕಡಿಮೆ. ಸಾಮಾನ್ಯ ಕೂಲಿ ಕಾರ್ಮಿಕರ ದಿನದ ಕೂಲಿ 500-600 ರೂ ಇದ್ದರೂ ಅವರ ವಾರ್ಷಿಕ ಆದಾಯ ಈ ಮಿತಿಯನ್ನು ಮೀರುತ್ತದೆ. ಇದರಿಂದ ನಿಜವಾದ ಬಡವರಿಗೂ ಬಿಪಿಎಲ್ ಕಾರ್ಡ್ ಸಿಗುತ್ತಿಲ್ಲ. ಹಾಗಾಗಿಯೇ, ಬಿಪಿಎಲ್ ಕಾರ್ಡ್ ಪಡೆಯಲು ಇರುವ ಆದಾಯ ಮಿತಿಯನ್ನು 1.20 ಲಕ್ಷದಿಂದ ಕನಿಷ್ಠ 3 ಲಕ್ಷ ರೂ. ಗೆ ಏರಿಸಬೇಕು ಎಂಬ ಆಗ್ರಹ ಸೂಕ್ತವಾಗಿದೆ.

ಇತ್ತೀಚೆಗೆ ಸರ್ಕಾರವು ಐಟಿ ಪಾವತಿದಾರರು, ಸರ್ಕಾರಿ ನೌಕರರು ಮತ್ತು 7.5 ಎಕರೆಗಿಂತ ಹೆಚ್ಚು ಜಮೀನು ಇರುವವರ ಕಾರ್ಡ್‌ಗಳನ್ನು ರದ್ದುಗೊಳಿಸುವ ಪ್ರಕ್ರಿಯೆ ಆರಂಭಿಸಿದೆ. ಆದರೆ ಈ ಪ್ರಕ್ರಿಯೆಯಲ್ಲಿ ತಾಂತ್ರಿಕ ದೋಷಗಳಿಂದಾಗಿ ಬಡವರ ಕಾರ್ಡ್‌ಗಳು ಸಹ ಅಕಾರಣವಾಗಿ ರದ್ದಾಗುತ್ತಿವೆ ಎಂಬ ಆರೋಪವಿದ್ದು, ಬಡವರಿಗೆ ಅನ್ಯಾಯವಾಗದಂತೆ ಪಾರದರ್ಶಕ ಪ್ರಕ್ರಿಯೆ ನಡೆಸಬೇಕು. ಸರ್ಕಾರ ಈಗಾಗಲೇ 12 ಲಕ್ಷಕ್ಕೂ ಹೆಚ್ಚು ಕಾರ್ಡ್‌ಗಳನ್ನು 'ಅನರ್ಹ' ಎಂದು ಗುರುತಿಸಿದೆ. ಈ ಪೈಕಿ ಈಗಾಗಲೇ ಲಕ್ಷಾಂತರ ಕಾರ್ಡ್‌ಗಳನ್ನು ಎಪಿಎಲ್ ಆಗಿ ಪರಿವರ್ತಿಸಲಾಗಿದೆ ಅಥವಾ ರದ್ದುಗೊಳಿಸಲಾಗಿದೆ. ಹೊಸ ಬಿಪಿಎಲ್ ಕಾರ್ಡ್‌ಗಾಗಿ 3.22 ಲಕ್ಷಕ್ಕೂ ಅಧಿಕ ಅರ್ಜಿಗಳು ವಿಲೇವಾರಿಗೆ ಇನ್ನೂ ಬಾಕಿ ಇವೆ.

ಆದುದರಿಂದ, ಬಿಪಿಎಲ್ ಕಾರ್ಡ್ ಪಡೆಯಲು ಇರುವ ಮಾನದಂಡಗಳನ್ನು ಕೂಡಲೇ ಪರಾಮರ್ಶಿಸಿ, ಪ್ರಸ್ತುತ ಇರುವ ಆದಾಯ ಮಿತಿಯನ್ನು ವಾಸ್ತವ ನೆಲೆಗಟ್ಟಿನ ಆಧಾರದಲ್ಲಿ ಗಣನೀಯವಾಗಿ ಏರಿಸುವುದು, ಬಡವರಿಗೆ ಯಾವುದೇ ಕಾರಣಕ್ಕೂ ಅನ್ಯಾಯವಾಗದಂತೆ ಪಾರದರ್ಶಕ ಪ್ರಕ್ರಿಯೆ ನಡೆಸುವುದು ಹಾಗೂ ಹೊಸ ಬಿಪಿಎಲ್ ಕಾರ್ಡ್‌ಗಾಗಿ ಬಾಕಿ ಇರುವ 3.22 ಲಕ್ಷಕ್ಕೂ ಅಧಿಕ ಅರ್ಜಿಗಳನ್ನು ತ್ವರಿತವಾಗಿ ವಿಲೇವಾರಿ ಮಾಡಲು ಅಗತ್ಯ ಹಾಗೂ ಸೂಕ್ತ ಕ್ರಮಗಳನ್ನು ಕೂಡಲೇ ಕೈಗೊಳ್ಳಬೇಕೆಂದು ಈ ಮೂಲಕ ಸರ್ಕಾರವನ್ನು ಒತ್ತಾಯಿಸುತ್ತೇನೆ.

ಉತ್ತರ:

ಕೇಂದ್ರ ಸರ್ಕಾರದಿಂದ ಈ ಕೆಳಕಂಡ ವಿಧಗಳಲ್ಲಿ 7,76,206 ಶಂಕಾಸ್ಪದ ಪಡಿತರ ಫಲಾನುಭವಿಗಳನ್ನು ಗುರುತಿಸಲಾಗಿರುತ್ತದೆ.

1. CBDT Income Group Annual Income>1,20,000
2. GSTN Gross Turnover > 25 Lacs
3. MCA Individual as Director
4. PDS Duplicate RC Inter State
5. PDS Duplicate RC Intra State
6. PDS RC Member Above 100 Years
7. PDS Silent RC > 12 Months
8. PDS Silent RC 6-12 Months
9. PDS Single Member Below 18 Years
10. PM KISAN Land Holding >7.5 Acres
11. UIDAI Aadhaar Status Deceased
12. Vehicle Ownership value Owning Light Motor Vehicle
13. Vehicle Ownership value Owning Medium Motor Vehicle
14. Vehicle Ownership value Owning Other than Mentioned Above.

ರಾಜ್ಯದಲ್ಲಿ ಆದ್ಯತಾ ಪಡಿತರ ಚೀಟಿಗಳನ್ನು ಪಡೆಯುವ ಬಗ್ಗೆ ಸರ್ಕಾರವು 2017 ರಲ್ಲಿ ಈ ಕೆಳಕಂಡಂತೆ ಹೊರಗಿಡುವ ಮಾನದಂಡಗಳನ್ನು ರೂಪಿಸಿದೆ.

1. ವೇತನವನ್ನು ಗಣನೆಗೆ ತೆಗೆದುಕೊಳ್ಳದೆ ಎಲ್ಲಾ ಖಾಯಂ ನೌಕರರು ಅಂದರೆ ಸರ್ಕಾರದ ಅಥವಾ ಸರ್ಕಾರದಿಂದ ಅನುದಾನವನ್ನು ಪಡೆಯುತ್ತಿರುವ ಸಂಸ್ಥೆಗಳು ಅಥವಾ ಸರ್ಕಾರಿ ಪ್ರಾಯೋಜಿತ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು/ ಮಂಡಳಿಗಳು/ ನಿಗಮಗಳು/ ಸ್ವಾಯತ್ತ ಸಂಸ್ಥೆಗಳು ಇತ್ಯಾದಿ ಒಳಗೊಂಡಂತೆ ಆದಾಯ ತೆರಿಗೆ/ಸೇವಾ ತೆರಿಗೆ/ ಜಿಎಸ್‌ಟಿ/ವೃತ್ತಿ ತೆರಿಗೆ ಪಾವತಿಸುವ ಎಲ್ಲಾ ಕುಟುಂಬಗಳು.

..3

2. ಗ್ರಾಮೀಣ ಪ್ರದೇಶಗಳಲ್ಲಿ 03 ಹೆಕ್ಟರ್ ಒಣಭೂಮಿ ಅಥವಾ ತತ್ಸಮಾನ ನೀರಾವರಿ ಭೂಮಿ ಹೊಂದಿರುವ ಕುಟುಂಬಗಳು ಅಥವಾ ಗ್ರಾಮೀಣ ಪ್ರದೇಶವನ್ನು ಹೊರತುಪಡಿಸಿ ನಗರ ಪ್ರದೇಶಗಳಲ್ಲಿ 1000 ಚದರ ಅಡಿಗಿಂತಲೂ ಹೆಚ್ಚಿನ ವಿಸ್ತೀರ್ಣದ ಪಕ್ಕಾ ಮನೆಯನ್ನು ಸ್ವಂತವಾಗಿ ಹೊಂದಿರುವ ಕುಟುಂಬಗಳು.
3. ಜೀವನೋಪಾಯಕ್ಕಾಗಿ ಸ್ವತಃ ಓಡಿಸುವ ಒಂದು ವಾಣಿಜ್ಯ ವಾಹನವನ್ನು ಅಂದರೆ ಟ್ರಾಕ್ಟರ್, ಮ್ಯಾಕ್ಸಿಕ್ಯಾಬ್ ಟ್ಯಾಕ್ಸಿ ಇತ್ಯಾದಿಗಳನ್ನು ಹೊಂದಿದ ಕುಟುಂಬವನ್ನು ಹೊರತುಪಡಿಸಿ ನಾಲ್ಕು ಚಕ್ರದ ವಾಹನಗಳನ್ನು ಹೊಂದಿರುವ ಎಲ್ಲಾ ಕುಟುಂಬಗಳು.
4. ಕುಟುಂಬದ ವಾರ್ಷಿಕ ಆದಾಯವು ರೂ. 1.20 ಲಕ್ಷಗಳಿಗಿಂತಲೂ ಹೆಚ್ಚು ಇರುವ ಕುಟುಂಬಗಳು.

ಸದರಿ ಮಾನದಂಡಗಳ ಆಧಾರದ ಮೇಲೆ ಅನರ್ಹವೆಂದು ಕಂಡುಬಂದ ಆದ್ಯತಾ ಪಡಿತರ ಚೀಟಿಗಳನ್ನು ಆದ್ಯತೇತರ ಪಡಿತರ ಚೀಟಿಗಳನ್ನಾಗಿ ಪರಿವರ್ತಿಸಲು ಕ್ರಮವಹಿಸಲಾಗುತ್ತಿದೆ ಹಾಗೂ ಸದರಿ ವಾರ್ಷಿಕ ಆದಾಯದ ಆಧಾರದ ಮೇಲೆ ಪಡಿತರ ಚೀಟಿಗಳನ್ನು ವಿತರಣೆ ಮಾಡಲಾಗುತ್ತಿದೆ.

ಆಡಳಿತ ಸುಧಾರಣಾ ಆಯೋಗವು ತಮ್ಮ 2ನೇ ವರದಿಯಲ್ಲಿ ಬದಲಾಗುತ್ತಿರುವ ಆರ್ಥಿಕ ಪರಿಸ್ಥಿತಿ ಹಿನ್ನೆಲೆಯಲ್ಲಿ ಆದ್ಯತಾ ಪಡಿತರ ಚೀಟಿ ಪಡೆಯಲು ಪರಿಷ್ಕೃತ ಮಾನದಂಡಗಳನ್ನು ಶಿಫಾರಸ್ಸು ಮಾಡಿದ್ದು, ವಾರ್ಷಿಕ ಆದಾಯದ ಮಿತಿಯನ್ನು ರೂ.3.00 ಲಕ್ಷಕ್ಕೆ ಹೆಚ್ಚಿಸಲು ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರದ ಆದೇಶ ಸಂಖ್ಯೆ: ಇ-ಆನಾಸ 159 ಡಿಆರ್‌ಎ 2025 ದಿನಾಂಕ: 30.10.2025 ರಲ್ಲಿ ರಾಜ್ಯದಲ್ಲಿರುವ ಅನರ್ಹ ಆದ್ಯತಾ ಪಡಿತರ ಚೀಟಿಗಳನ್ನು ಪತ್ತೆ ಹಚ್ಚಿ ಸದರಿ ಅನರ್ಹ ಆದ್ಯತಾ ಪಡಿತರ ಚೀಟಿಗಳನ್ನು ಆದ್ಯತೇತರ ಪಡಿತರ ಚೀಟಿಗಳನ್ನಾಗಿ (NPHH) ಪರಿವರ್ತಿಸಲು ಹಾಗೂ ಈ ರೀತಿ ಪರಿವರ್ತಿಸಿದ ಪ್ರಮಾಣಕ್ಕೆ ಅನುಗುಣವಾಗಿ ಅಷ್ಟೇ ಪ್ರಮಾಣದ ಆದ್ಯತಾ ಪಡಿತರ ಚೀಟಿಗಳನ್ನು (PHH) ಬಡತನ ರೇಖೆಗಿಂತ ಕೆಳಗಿರುವ ಅರ್ಹ ನಾಗರಿಕರಿಗೆ ವಿತರಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ.

ದಿನಾಂಕ 28.11.2025 ರ ಅಂತ್ಯಕ್ಕೆ ರಾಜ್ಯದಲ್ಲಿ ಆದ್ಯತಾ ಪಡಿತರ ಚೀಟಿ ಕೋರಿ ಈಗಾಗಲೇ ಸಲ್ಲಿಸಿರುವ ಒಟ್ಟು 3,36,982 ಅರ್ಜಿಗಳ ಸ್ಥಳ ತನಿಖೆ ಕಾರ್ಯ ನಡೆಸಿ ಅರ್ಹರಿರುವ ಅರ್ಜಿದಾರರಿಗೆ ನಿಯಮಾನುಸಾರ ಆದ್ಯತಾ ಪಡಿತರ ಚೀಟಿ ವಿತರಣೆ ಮಾಡಲು ಕ್ರಮವಹಿಸಲಾಗಿರುತ್ತದೆ.

ಇ-ಶ್ರಮ್ ನೋಂದಾಯಿತ ಕಾರ್ಮಿಕರಿಗೆ ಹಾಗೂ ಅತ್ಯಂತ ದುರ್ಬಲ ವರ್ಗದ ಬುಡಕಟ್ಟು ಜನಾಂಗದವರಿಗೆ ನಿರಂತರವಾಗಿ ಆದ್ಯತಾ ಪಡಿತರ ಚೀಟಿ ನೀಡಲು ಕ್ರಮವಹಿಸಲಾಗಿರುತ್ತದೆ.

ಮುಂದುವರೆದು, ಇಲಾಖೆಯು ಜಿಲ್ಲೆಗಳಿಂದ ಸ್ವೀಕೃತವಾಗುವ ಪ್ರಸ್ತಾವನೆಯನ್ನಾಧರಿಸಿ 102 ಗಂಭೀರ ಕಾಯಿಲೆಗಳನ್ನು ಗುರುತಿಸಿ ವೈದ್ಯಕೀಯ ತುರ್ತು ಪ್ರಕರಣಗಳಿಗಾಗಿ ಪ್ರತ್ಯೇಕವಾದ **Module** ಅನ್ನು ಅಭಿವೃದ್ಧಿಪಡಿಸಲಾಗಿರುತ್ತದೆ. ಪ್ರಸ್ತುತ ವೈದ್ಯಕೀಯ ತುರ್ತು **Module** ಆಹಾರ ತಂತ್ರಾಂಶದಲ್ಲಿ ದಿನಾಂಕ:24.10.2025 ರಿಂದ ಸಾರ್ವಜನಿಕ ಬಳಕೆಗೆ ಲಭ್ಯವಿರುತ್ತದೆ.

ಈ ಹೊಸ ಮಾಡ್ಯೂಲ್ ಮೂಲಕ, ಇಲಾಖೆಯಿಂದ ಗುರುತಿಸಲಾದ 102 ಗಂಭೀರ ಕಾಯಿಲೆಗಳ ಚಿಕಿತ್ಸೆಗಾಗಿ ಆದ್ಯತಾ ಪಡಿತರ ಚೀಟಿಗೆ ಫಲಾನುಭವಿಗಳು ಅರ್ಜಿ ಸಲ್ಲಿಸಬಹುದಾಗಿರುತ್ತದೆ.

ಅರ್ಜಿಯನ್ನು ಸಲ್ಲಿಸಿದ ನಂತರ ಸಂಬಂಧಿಸಿದ ಆಹಾರ ನಿರೀಕ್ಷಕರು ವೈದ್ಯಕೀಯ ದಾಖಲೆಗಳನ್ನು ಮತ್ತು ಸ್ಥಳ ಪರಿಶೀಲನೆಯನ್ನು ಜರುಗಿಸಿ, ಅರ್ಜಿದಾರರು ಅರ್ಹರೆಂದು ಕಂಡು ಬಂದಲ್ಲಿ ತಮ್ಮ ಸ್ಥಳ ಪರಿಶೀಲನೆ ವರದಿ ಮತ್ತು ಫೋಟೋದೊಂದಿಗೆ ಸಂಬಂಧಿಸಿದ ಜಿಲ್ಲೆಯ ಜಂಟಿ/ಉಪ ನಿರ್ದೇಶಕರಿಗೆ ಆನ್‌ಲೈನ್ ಮೂಲಕ ಕಳುಹಿಸಿ ಅನುಮೋದನೆ ಪಡೆದು ಹೊಸ ಪಡಿತರ ಚೀಟಿಯನ್ನು ವಿತರಿಸಬಹುದಾಗಿರುತ್ತದೆ.

ಆನಾಸ 128 ಡಿಆರ್‌ಎ 2026

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ
ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ
ಇಲಾಖಾ ಸಚಿವರು